ತರೀಕೆರೆ ತಾಲ್ಲೂಕಿನಲ್ಲಿ ಗ್ರಂಥಾಲಯಗಳನ್ನು ತೆರೆಯುವ ಬಗ್ಗೆ.

1846(1951)

ಶ್ರೀ ನೀಲಕಂಠಪ್ಪ ಬಿ.ಆರ್(ತರೀಕೆರೆ): ಮಾನ್ಯ ವಯಸ್ಕರ ಶಿಕ್ಷಣ, ಗ್ರಂಥಾಲಯ ಹಾಗೂ ಮುದ್ರಣ ಮತ್ತು ಲೇಖನ ಸಾಮಗ್ರಿಗಳ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ತರೀಕೆರೆ ತಾಲ್ಲೂಕಿನಲ್ಲಿ ಪ್ರಸ್ತುತದಲ್ಲಿರುವ ಗ್ರಂಥಾಲಯಗಳೆಷ್ಟು?

ಆ) ತಾಲ್ಲೂಕಿನ ಒಟ್ಟಾರೆ ಬೇಡಿಕೆಗೆ ಈ ಸಂಖ್ಯೆ ಕಡಿಮೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ?

ಇ) ಬಂದಿದ್ದಲ್ಲಿ ಹೆಚ್ಚು ಗ್ರಂಥಾಲಯಗಳನ್ನು ತೆರೆಯಲು ಸರ್ಕಾರ ಕ್ರಮ ಕೈಗೊಳ್ಳುವುದೇ?

ಶ್ರೀ ಬಾಬುರಾವ್ ಚಿವ್ವಾಣ್ (ವಯಸ್ಕರ ಶಿಕ್ಷಣ ಗ್ರಂಥಾಲಯ ಹಾಗೂ ಮುದ್ರಣ ಮತ್ತು ಲೇಖನ ಸಾಮಗ್ರಿಗಳ ರಾಜ್ಯ ಸಚಿವರು):

ಅ) ತರೀಕೆರೆ ತಾಲ್ಲೂಕಿನಲ್ಲಿರುವ ಗ್ರಂಥಾಲಯಗಳು - 14

ಆ) ಹೌದು.

ಇ) ಹಣಕಾಸಿನ ಪರಿಸ್ಥಿತಿಯಲ್ಲಿ ಹಂತ ಹಂತವಾಗಿ ಗ್ರಂಥಾಲಯಗಳನ್ನು ತೆರೆಯಲು ಕ್ರಮ ಕೈಗೊಳ್ಳಲಾಗುವುದು.

ತರೀಕೆರೆ ತಾಲ್ಲೂಕಿನ ಗ್ರಾಮಗಳಿಗೆ ಕುಡಿಯುವ ನೀರಿನ ಯೋಜನೆ.

1847(1952)

ಶ್ರೀ ನೀಲಕಂಠಪ್ಪ ಬಿ.ಆರ್.(ತರೀಕೆರೆ): ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜೀವ್ ಗಾಂಧಿ ಕುಡಿಯುವ ನೀರಿನ ಯೋಜನೆಯಡಿ ತರೀಕೆರೆ ತಾಲ್ಲೂಕಿನ 50 ಗ್ರಾಮಗಳಿಗೆ ಕುಡಿಯುವ ನೀರನ್ನು ಒದಗಿಸುವ ಕಾಮಗಾರಿಗೆ ಅಂದಾಜು ಮತ್ತು ನಕ್ಷೆಯನ್ನು ಸಿದ್ಧಪಡಿಸಲು ಸರ್ಕಾರ ಆದೇಶ ಹೊರಡಿಸಿರುವುದು ನಿಜವೇ?